ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ತಿಪ್ಪಣ್ಣಪ್ಪ ಕಮಕನೂರ ರವರ ಶೂನ್ಯ ವೇಳೆ ಪ್ರಸ್ತಾಪಕ್ಕೆ ಉತ್ತರ

ವಿಷಯ: ದಿನಾಂಕ:27.06.2023ರ ವಿಜಯ ಕರ್ನಾಟಕ ದಿನಪತ್ರಿಕೆಯಲ್ಲಿ "ಗೂಡಂಗಡಿಗಳಲ್ಲಿ ಡ್ರಗ್ಸ್ ದಂಧೆ" ಶೀರ್ಷಿಕೆಯಡಿ ವರದಿ ಪ್ರಕಟವಾಗಿರುತ್ತದೆ.

ರಾಜಧಾನಿಯ ಸಣ್ಣಪುಟ್ಟ ಸಿಗರೇಟ್ ಅಂಗಡಿಗಳಲ್ಲಿ ಕದ್ದುಮುಚ್ಚಿ ಮಾದಕ ವಸ್ತುಗಳನ್ನು ಮಾರುತ್ತಿದ್ದು ಇಂತಹ ಅಂಗಡಿಗಳ ಮೇಲೆ ಖಾಕಿ ಪಡೆ ಹದ್ದಿನ ಕಣ್ಣಿಟ್ಟಿರುವುದು ಎಲ್ಲರಿಗೂ ತಿಳಿದಿರುವ ವಿಚಾರವಾಗಿದೆ. ನಗರದೊಳಗೆ ಹಾಗೂ ಹೊರ ವಲಯದ ತಂಬಾಕು ಉತ್ಪನ್ನ ಮಾರಾಟ ಮಳಿಗೆಗಳ ಮಾಲೀಕರು ಹಣ ಸಂಪಾದನೆಗಾಗಿ ಅಡ್ಡದಾರಿ ಹಿಡಿದಿದ್ದು ಪೊಲೀಸರ ಕಣ್ತಪ್ಪಿಸಿ ಡ್ರಗ್ಸ್ ದಂಧೆ ನಡೆಸುತ್ತಿರುವುದು ಎಲ್ಲರಿಗೂ ತಿಳಿದಿರುವ ವಿಚಾರವಾಗಿದೆ.

ಯುವ ಸಮೂಹಕ್ಕೆ ಗೂಡಂಗಡಿಗಳು ಬೀಡಿ, ಸಿಗರೇಟ್, ಗುಟ್ಕಾ ಹಾಗೂ ತಂಬಾಕು ಉತ್ಪನ್ನಗಳನ್ನು ಮಾರುವ ನಶೆಯ ಲೋಕವನ್ನು ಸೃಷ್ಟಿಸುತ್ತಿವೆ. ಎಲ್ಲಾ ನಿಯಮಗಳನ್ನು ಗಾಳಿಗೆ ತೂರಿ ಪೊಲೀಸರ ಕಣ್ತಪ್ಪಿಸಿ ಇಂತಹ ಪ್ರಕರಣಗಳು ನಿರಂತರವಾಗಿ ನಡೆದಿವೆ.

ಕಳೆದ ಮೂರು ವರ್ಷಗಳಲ್ಲಿ ಸುಮಾರು 12000ಕ್ಕೂ ಹೆಚ್ಚು ಡ್ರಗ್ಸ್ ಪ್ರಕರಣಗಳು ದಾಖಲಾಗಿದ್ದು,ಬಾರ್ ಮತ್ತು ರೆಸ್ಟೋರೆಂಟ್ ಆವರಣ, ಪಬ್, ಕಾಫಿ–ಡೇ, ಡಾನ್ಸ್‌ಬಾರ್ ಮುಂತಾದ ಯುವಕರೇ ಹೆಚ್ಚಿನ ಸಂಖ್ಯೆಯಲ್ಲಿ ಸೇರುವ ಸ್ಥಳಗಳು, ಶಾಲಾ ಕಾಲೇಜು ಆವರಣ, ಬಸ್ ನಿಲ್ದಾಣ ಹಾಗೂ ಇನ್ನಿತರೆ ಪ್ರದೇಶಗಳು ಮಾದಕ ದ್ರವ್ಯ ವಸ್ತುಗಳನ್ನು ಮಾರುವ ತಾಣಗಳಾಗಿವೆ.

ಮಾಹಿತಿ ಪ್ರಕಾರ ಬೆಂಗಳೂರಿನಲ್ಲಿ 2022ರಲ್ಲಿ 3913 ಕೆ.ಜಿ. ಮಾದಕವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ. ಇದರ ಒಟ್ಟು ಮೌಲ್ಯ 90 ಕೋಟಿ. ದಯಮಾಡಿ ಸರ್ಕಾರ ಯುವಜನತೆಯ ಭವಿಷ್ಯದ ಮೇಲೆ ಪರಿಣಾಮ ಬೀರುವ ಮಾದಕ ವಸ್ತುಗಳಿಗೆ ಕಡಿವಾಣ ಹಾಕುವ ಸಲುವಾಗಿ ಸರಿಯಾದ ಕಾನೂನು ರೂಪಿಸಬೇಕು. ಮಾದಕ ವಸ್ತುಗಳನ್ನು ನಿಯಂತ್ರಿಸುವ ಸಲುವಾಗಿ ವಿಶೇಷ ಕಾರ್ಯಪಡೆಯನ್ನು ಸರ್ಕಾರ ನೇಮಿಸಬೇಕೆಂದು ಶೂನ್ಯವೇಳೆಯಲ್ಲಿ ಮಾನ್ಯ ಗೃಹ ಸಚಿವರನ್ನು ಒತ್ತಾಯಿಸುತ್ತೇನೆ.

ಉತ್ತರ:

ಬೆಂಗಳೂರು ನಗರದ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಮಾದಕ ವಸ್ತುಗಳ ಮಾರಾಟ ಜಾಲ ಮತ್ತು ಬಳಕೆ ಮಾಡುವುದನ್ನು ತಡೆಗಟ್ಟುವ ನಿಟ್ಟಿನಲ್ಲಿ ಕೆಳಕಂಡ ಕ್ರಮಗಳನ್ನು ಜರುಗಿಸಲಾಗಿದೆ.

- ಬೆಂಗಳೂರು ನಗರ ಸಿಸಿಬಿ ಘಟಕದಲ್ಲಿ ಡ್ರಗ್ಸ್ ಹಾವಳಿ ನಿಯಂತ್ರಣಕ್ಕೆ ಪ್ರತ್ಯೇಕ ದಳವನ್ನು ರಚಿಸಲಾಗಿದೆ.
- ಸಾರ್ವಜನಿಕರ ಅನುಕೂಲಕ್ಕಾಗಿ ಮಾದಕ ವಸ್ತು ಮಾರಾಟ ಮತ್ತು ಸೇವನೆ ಮಾಡುವವರ ವಿರುದ್ಧ ದೂರು ನೀಡಲು ಟೋಲ್ ಫ್ರೀ ಸಂಖ್ಯೆ 1908 ದೂರವಾಣಿಯ ಮುಖಾಂತರ ಸಂಪರ್ಕಿಸಿ ಮಾಹಿತಿ ನೀಡುವ ಯೋಜನೆಯನ್ನು ಪ್ರಾರಂಭಿಸಲಾಗಿದೆ.
- ಶಾಲಾ ಕಾಲೇಜುಗಳಿಗೆ ಭೇಟಿ ನೀಡಿ ವಿದ್ಯಾರ್ಥಿಗಳಿಗೆ ಮಾದಕ ವಸ್ತುಗಳ ಸೇವನೆಯಿಂದ ಆಗುವ ದುಷ್ಪರಿಣಾಮಗಳ ಬಗ್ಗೆ ಡ್ರಗ್‌ಅವೇರ್‌ನೆಸ್ ಪ್ರೋಗ್ರಾಮ್‌ಅನ್ನು ನಡೆಸಿ, ಉಪನ್ಯಾಸ, ದೃಶ್ಯರೂಪಕಗಳ ಮೂಲಕ ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. ಶಾಲಾ ಕಾಲೇಜುಗಳ ಹತ್ತಿರ ಮತ್ತು ಸಾರ್ವಜನಿಕ ಸ್ಥಳಗಳಲ್ಲಿ ಮಾದಕ ವಸ್ತುಗಳನ್ನು ಮಾರಾಟ ಮಾಡುತ್ತಿರುವ ಹಾಗೂ ಮಾದಕ ವಸ್ತು ಸೇವನೆ ಮಾಡುವವರ ವಿರುದ್ಧ ತ್ವರಿತವಾಗಿ ಕಠಿಣ ಕ್ರಮ ಕೈಗೊಳ್ಳಲಾಗಿದೆ.

- ಸಾರ್ವಜನಿಕ ಸ್ಥಳಗಳು, ಜನಸಂದಣಿ ಪ್ರದೇಶಗಳು ಹಾಗೂ ಪ್ರಮುಖ ವ್ಯಕ್ತಿಗಳು ವಾಸಿಸುತ್ತಿರುವ ಪ್ರದೇಶಗಳು ಮತ್ತು ಕೊಳಚೆ ಪ್ರದೇಶಗಳಲ್ಲಿ ಸಾರ್ವಜನಿಕ ಸಭೆ, ಮೆರವಣಿಗೆಗಳನ್ನು ನಡೆಸುವುದರ ಮೂಲಕ ವ್ಯಾಪಕ ಪ್ರಚಾರ ಕೈಗೊಳ್ಳಲು ಹಾಗೂ ಸಾರ್ವಜನಿಕರಲ್ಲಿ ಮಾದಕ ವಸ್ತುಗಳ ಸೇವನೆ ವಿರುದ್ಧ ಜಾಗೃತಿ ಮೂಡಿಸಲು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಅಲ್ಲದೆ ಠಾಣಾ ಸರಹದ್ದಿನ ಬೀಟ್ ಮತ್ತು ಸಬ್-ಬೀಟ್‌ಗಳಲ್ಲಿ ಆಗ್ಗಿಂದಾಗ್ಗೆ ಸಭೆಯನ್ನು ನಡೆಸಿ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ನಡೆಸಲಾಗಿದೆ.
- ಒಂದು ಬಾರಿಗಿಂತ ಹೆಚ್ಚು ಬಾರಿ ಎನ್.ಡಿ.ಪಿ.ಎಸ್. ಪ್ರಕರಣಗಳಲ್ಲಿ ಬಾಗಿಯಾದ ಅಥವಾ ಹವ್ಯಾಸಿ ಆರೋಪಿತರಿಗೆ 3 ಜನ ವಿದೇಶಿಯವರು ಸೇರಿದಂತೆ ಎಂಟು ಡ್ರಗ್ಸ್ ಪೆಡ್ಲರ್‌ಗಳನ್ನು PIT-NDPS ಕಾಯ್ದೆಅಡಿಯಲ್ಲಿ ಬಂಧನ ಕ್ರಮ ಜರುಗಿಸಲಾಗಿದೆ.
- ನಗರಕ್ಕೆ ಮಾದಕ ವಸ್ತುಗಳು (ಗಾಂಜಾ) ಸರಬರಾಜು ಆಗುವ ಮಾರ್ಗಗಳ ಮೇಲೆ ತೀವ್ರ ನಿಗಾವಣೆ ಇಟ್ಟು ಕಟ್ಟುನಿಟ್ಟಾದ ಕಾನೂನು ಕ್ರಮಗಳನ್ನು ಜರುಗಿಸಲಾಗುತ್ತಿದೆ. Bitcoin ಬಳಸಿ ಡಾರ್ಕ್‌ನೆಟ್ (Darknet), ಮುಖಾಂತರ ಡ್ರಗ್ಸ್ ಸರಬರಾಜು ಮಾಡುತ್ತಿದ್ದ ಜಾಲವನ್ನು ಪತ್ತೆ ಮಾಡಿ ಕಾನೂನು ಕ್ರಮ ಕೈಗೊಳ್ಳಲಾಗಿರುತ್ತದೆ. ಅಲ್ಲದೆ ವಿದೇಶಗಳಿಂದ ಪೋಸ್ಟಲ್/ಕೊರಿಯರ್ಸ್ ಮುಖಾಂತರ ನಗರಕ್ಕೆ ಡ್ರಗ್ಸ್ ಸರಬರಾಜು ಮಾಡುತ್ತಿದ್ದ ಜಾಲವನ್ನು ಸಹ ಭೇದಿಸಲಾಗಿದೆ.
- ನಗರದಲ್ಲಿ ಡ್ರಗ್ಸ್ ಅಕ್ರಮಗಳನ್ನು ಪರಿಣಾಮಕಾರಿಯಾಗಿ ನಿಯಂತ್ರಿಸುವ ಸಲುವಾಗಿ NCB, DRI, Customs, Railway, Education ಇಲಾಖೆಗಳ ಅಧಿಕಾರಿಗಳ ಸಮನ್ವಯ ಸಭೆಯನ್ನು ನಡೆಸಲಾಗಿದೆ.
- ವಿದೇಶಿಯರು ವಿಶೇಷವಾಗಿ ಆಫ್ರಿಕಾ ಮೂಲದ ಪ್ರಜೆಗಳು ಮಾದಕ ವಸ್ತುಗಳ ಮಾರಾಟ/ಸೇವನೆಯ ಪ್ರಕರಣಗಳಲ್ಲಿ ಆರೋಪಿಗಳಿಗೆ ಯಾವ ಮೂಲಗಳಿಂದ ಮಾದಕ ವಸ್ತುಗಳ ಸರಬರಾಜಾಗುತ್ತಿವೆ ಎಂಬುವುದರ ಬಗ್ಗೆ ಸಂಪೂರ್ಣ ಮಾಹಿತಿ ಸಂಗ್ರಹಿಸಿ, ಇಂತಹ ಕೃತ್ಯಗಳಲ್ಲಿ ತೊಡಗಿರುವ ವಿದೇಶಿಯರನ್ನು ದಸ್ತಗಿರಿ ಮಾಡಿ ಅವರುಗಳ ಪಾಸ್‌ಪೋರ್ಟ್‌ಗಳನ್ನು ಮುಟ್ಟುಗೋಲು ಹಾಕಿಕೊಂಡು ಸದರಿಯವರ ಗಡಿಪಾರಿಗೆ ಕ್ರಮ ಕೈಗೊಳ್ಳಲಾಗುತ್ತಿದೆ. ಅಂತಹವರ ವಿರುದ್ಧ ವಿಶೇಷ ಕಾರ್ಯಚರಣೆಗಳನ್ನು ನಡೆಸಿ ಕಠಿಣ ಕಾನೂನಿನ ಕ್ರಮ ಕೈಗೊಳ್ಳಲಾಗಿದೆ.
- ನಗರದಲ್ಲಿ ಪ್ರತಿಷ್ಠಿತ ಹೋಟೆಲ್, ಪಬ್‌ಗಳಲ್ಲಿ ರಾತ್ರಿ ಪಾರ್ಟಿಗಳನ್ನು ನಡೆಸಿ ಅಲ್ಲಿಗೆ ಬರುತ್ತಿದ್ದ ಪ್ರತಿಷ್ಠಿತರಿಗೆ ಹಾಗೂ ಸೆಲೆಬ್ರಿಟಿಗಳಿಗೆ ಮಾದಕ ವಸ್ತುಗಳನ್ನು ಸರಬರಾಜು ಮಾಡುತ್ತಿದ್ದ ವ್ಯವಸ್ಥಿತ ಜಾಲವನ್ನು ಪತ್ತೆ ಮಾಡಿ ಅವರನ್ನು ದಸ್ತಗಿರಿ ಮಾಡಿ ಅವರ ವಿರುದ್ಧ ಕ್ರಮ ಕೈಗೊಳ್ಳಲಾಗಿದೆ.
- ಯುವಕರು ಹೆಚ್ಚಾಗಿ ಸೇರುವ ಸ್ಥಳಗಳಾದ ಬಾರ್ ಮತ್ತು ರೆಸ್ಟೋರೆಂಟ್, ಕಾಫಿ-ಡೇ, ಪಬ್, ಡ್ಯಾನ್ಸ್‌ಬಾರ್, ಶಾಲಾ ಕಾಲೇಜು ಆವರಣ, ಬಸ್ ನಿಲ್ದಾಣ ಹಾಗೂ ಇನ್ನಿತರೆ ಪ್ರದೇಶಗಳಲ್ಲಿ ಮಾದಕ ದ್ರವ್ಯ ವಸ್ತುಗಳನ್ನು ಮಾರಾಟ ಮಾಡುತ್ತಿರುವ ಬಗ್ಗೆ ಮಾಹಿತಿಯನ್ನು ಸಂಗ್ರಹಿಸಿ ಕಾನೂನಿನ ರೀತಿ ಕಟ್ಟುನಿಟ್ಟಿನ ಕ್ರಮ ಜರುಗಿಸಲಾಗುತ್ತಿದೆ, ಸಾರ್ವಜನಿಕರ ಗಮನ ಸೆಳೆಯಲು ಬ್ಯಾನರ್, ಪೋಸ್ಟರ್‌ಗಳನ್ನು ಜನಸಂದಣಿ ಇರುವ ಸ್ಥಳಗಳಲ್ಲಿ ಪ್ರದರ್ಶಿಸಿ ಕರಪತ್ರ ಹಂಚಲಾಗುತ್ತಿದೆ, ಜೊತೆಗೆ ಕಿರುಚಿತ್ರಗಳ ಮೂಲಕ ಅರಿವು ಮೂಡಿಸುವ ಕಾರ್ಯ ಮಾಡಲಾಗಿದೆ.
- ಮಾದಕ ವಸ್ತುಗಳನ್ನು ಬೆಳೆಯುವ ಪ್ರದೇಶ ಮತ್ತು ಸಿಂಥೆಟಿಕ್ ಡ್ರಗ್ಸ್‌ಗಳನ್ನು ತಯಾರಿಸುವ ಲ್ಯಾಬ್‌ಗಳ ಹಾಗೂ ಸಂಗ್ರಹಿಸಿಟ್ಟಿದ್ದ ಸಂಗ್ರಹಗಾರಗಳ ಮೇಲೆ ದಾಳಿ ಮಾಡಿ ಸಂಬಂಧಪಟ್ಟವರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಲಾಗಿದೆ.

- ಬೆಂಗಳೂರು ನಗರದಲ್ಲಿ ಮಾದಕ ವಸ್ತುಗಳ ಅಕ್ರಮ ಸಾಗಾಣಿಕೆ ಮತ್ತು ಮಾರಾಟ ತಡೆಗಟ್ಟುವ ಸಲುವಾಗಿ ಆರೋಪಿಗಳ ವಿರುದ್ಧ ಕಟ್ಟುನಿಟ್ಟಿನ ಕ್ರಮಗಳನ್ನು ಅನುಸರಿಸಿ, ಇಬ್ಬರು ಡ್ರಗ್ಸ್ ಪೆಡ್ಲರ್‌ಗಳ ಚರಾಸ್ತಿ/ ಸ್ಥಿರಾಸ್ತಿಗಳನ್ನು NDPS Chapter-V ರಡಿಯಲ್ಲಿ ಮುಟ್ಟುಗೋಲು ಹಾಕಿಕೊಳ್ಳಲಾಗಿದೆ.
- ಬೆಂಗಳೂರು ನಗರ ಪೊಲೀಸರು ವಿದ್ಯಾಸಂಸ್ಥೆಗಳ ಬಳಿ ಮಾದಕ ವಸ್ತು ಪದಾರ್ಥಗಳ ಮಾರಾಟ / ಸೇವನೆ ಮಾಡುತ್ತಿದ್ದವರ ವಿರುದ್ಧ ನಿರಂತರ ವಿಶೇಷ ಕಾರ್ಯಾಚರಣೆ ನಡೆಸಿ ಮಾರಾಟ ಮಾಡುತ್ತಿದ್ದವರು ಮತ್ತು ಸೇವನೆ ಮಾಡಿದವರ ವಿರುದ್ಧ ಕಾನೂನು ಕ್ರಮಕ್ರಮ ಜರುಗಿಸಿದ್ದು ವಿವರ ಕೆಳಕಂಡಂತಿದೆ.

| No of Cases Reported on Peddlers | No of Cases Reported On Consumers | Total Cases | Total Drugs Seized in KGs | | | | MDMA Ecstasy Tablets/ LSD Strips (in No.) | COTPA |
|---|---|---|---|---|---|---|---|---|
| | | | Ganja | Hashish Oil | Opium | Synthetic Drugs | | |
| 130 | 1003 | 1133 | 204.128 | 1.195 | 0.768 | 1.311 | 123 Tablets/ 70 Strips | 171 Case |

- ದಿನಾಂಕ 26.06.2023 ರಂದು ವಿಶ್ವ ಮಾದಕ ವಸ್ತುಗಳ ಸೇವನೆ ಮತ್ತು ಕಳ್ಳಸಾಗಾಣಿಕೆ ವಿರೋಧಿ ದಿನ ಅಂಗವಾಗಿ ಬೆಂಗಳೂರು ನಗರ ಪೊಲೀಸ್ ಕಮಿಷನರೇಟ್ ವ್ಯಾಪ್ತಿಯ ಎಲ್ಲಾ ದರ್ಜೆಯ ಪೊಲೀಸ್ ಅಧಿಕಾರಿಗಳು ಅಂದರೆ ನಗರ ಪೊಲೀಸ್ ಆಯುಕ್ತರಿಂದ ಪೊಲೀಸ್ ಉಪ ನಿರೀಕ್ಷಕರನ್ನು ಒಳಗೊಂಡಂತೆ, ಒಟ್ಟು 618 ಅಧಿಕಾರಿಗಳು, 388 ಶಾಲೆ, 253 ಕಾಲೇಜು ಹಾಗೂ 51 ವೃತ್ತಿನಿರತ ಕಾಲೇಜುಗಳಿಗೆ ಭೇಟಿ ನೀಡಿ, ಸುಮಾರು 1,95,000 ವಿದ್ಯಾರ್ಥಿಗಳಿಗೆ ಮಾದಕ ವಸ್ತು ದ್ರವ್ಯಗಳ ಸೇವನೆಯಿಂದ ಆಗುವ ಹಾನಿ ಹಾಗೂ ಎನ್.ಡಿ.ಪಿ.ಎಸ್ ಕಾಯ್ದೆ ಬಗ್ಗೆ ಅರಿವು ಮೂಡಿಸಲಾಯಿತು.
- ಡ್ರಗ್ಸ್ ಪೆಡ್ಲರ್‌ಗಳಿಂದ ವಶಪಡಿಸಿಕೊಳ್ಳಲಾಗಿರುವ ಮಾದಕ ವಸ್ತುಗಳನ್ನು ದಿನಾಂಕ 24.03.2023 ರಂದು 92 ಕೋಟಿಯಷ್ಟು ಮೌಲ್ಯದ ಡ್ರಗ್ಸ್ ಹಾಗೂ ದಿನಾಂಕ 26.06.2023 ರಂದು ಒಟ್ಟು ರೂ: 21 ಕೋಟಿ ಮೌಲ್ಯದ ಮಾದಕ ವಸ್ತುಗಳನ್ನು ನ್ಯಾಯಾಲಯಗಳ ಅನುಮತಿ ಪಡೆದು ನಾಶಪಡಿಸಲಾಗಿದೆ.
- ಬೆಂಗಳೂರು ನಗರ ಪೊಲೀಸರು ಮಾದಕ ವಸ್ತುಗಳ ಮಾರಾಟಗಾರರ ವಿರುದ್ಧ ಸಮರ ಸಾರಿದ್ದು, ಹವ್ಯಾಸಿ ಮಾದಕ ವಸ್ತುಗಳ ಮಾರಾಟಗಾರರ ಬಗ್ಗೆ ಕ್ರೋಢೀಕರಿಸಿದ ಮಾಹಿತಿಯನ್ನೊಳಗೊಂಡ ಒಂದು ದತ್ತಾಂಶ ಸಂಗ್ರಹಣೆಯ (Database) ತಂತ್ರಾಂಶವನ್ನು ಅಭಿವೃದ್ಧಿಪಡಿಸಿದ್ದು, ಈ ದತ್ತಾಂಶ ಸಂಗ್ರಹಣೆ (Database) ಯಿಂದ ಬೆಂಗಳೂರು ನಗರದ ಪೊಲೀಸರಿಗೆ ಅವಶ್ಯಕವಾದ ಮಾದಕ ವಸ್ತುಗಳ ಮಾರಾಟಗಾರರ ಮತ್ತು ಸೇವನೆ ಮಾಡುವವರ ಮಾಹಿತಿ ಶೀಘ್ರವಾಗಿ ದೊರಕುವಂತಾಗಿದೆ.

ಒಇ 18 ಪಿಎನ್‌ಡಿ 2023(ಇ)

(ಡಾ: ಜಿ.ಪರಮೇಶ್ವರ)
ಗೃಹ ಸಚಿವರು